ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ : 1129

ಸದಸ್ಯರ ಹೆಸರು : ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 20.12.2018

ಉತ್ತರಿಸಬೇಕಾದ ಸಚಿವರು : ಮುಖ್ಯಮಂತ್ರಿಗಳು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿನ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿನ ಸಿಬ್ಬಂದಿಗಳ ಅನುದಾನರಹಿತ ಸೇವೆಯನ್ನು ಪಿಂಚಣಿಗೆ ಪರಿಗಣಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಅನುದಾನಕ್ಕೆ ಒಳಪಡುವವರೆಗೆ ಸಲ್ಲಿಸಿರುವ ಅನುದಾನರಹಿತ ಸೇವೆಯನ್ನು ವೇತನ, ವೇತನ ನಿಗಧಿ, ರಜೆ ಮತ್ತು ಪಿಂಚಣಿ ಮತ್ತು ಇತರೆ ಸೇವಾ ಸೌಲಭ್ಯಗಳಿಗೆ ಪರಿಗಣಿಸಲು ಅವಕಾಶವಿರುವುದಿಲ್ಲವೆಂದು ದಿನಾಂಕ : 01/06/1995ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರ (ವೇತನ, ಪಿಂಚಣಿ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ-2014ನ್ನು ಜಾರಿಗೊಳಿಸಲಾಗಿದೆ. ಈ ಅಧಿನಿಯಮವನ್ನು ಪ್ರಶ್ನಿಸಿ ಅನುದಾನಿತ ಶಿಕ್ಷಣ ಸಂಸ್ಥೆಗಳು ಸಲ್ಲಿಸಿದ್ದ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಂಬಂಧದ ಪ್ರಕರಣದಲ್ಲಿ ನ್ಯಾಯಾಲಯವು ದಿನಾಂಕ : 10/07/2015ರಂದು ತೀರ್ಪು ನೀಡಿ ಪ್ರಸ್ತಾಪಿತ ಅಧಿನಿಯಮವನ್ನು "struck down" ಮಾಡಿರುತ್ತದೆ. ಸದರಿ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಅಪೀಲು ಸಂಖ್ಯೆ : 2476/2015 ಮತ್ತು 2467/2015ನ್ನು ದಾಖಲಿಸಿದೆ. ಸರ್ಕಾರವು ಸಲ್ಲಿಸಿದ ಅಪೀಲಿನಲ್ಲಿ ಮಾನ್ಯ ನ್ಯಾಯಾಲಯವು ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ : 27/11/2015ರಂದು ತೀರ್ಪಿಗೆ ತಡೆಯಾಜ್ಞೆಯನ್ನು ಪಡೆಯಲಾಗಿದೆ. ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು, ಪ್ರಕರಣವು ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ. ಮುಂದುವರೆದು, ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮವನ್ನು ರಚಿಸುವ ಸಂಬಂಧ ಉಭಯ ಸದನಗಳಲ್ಲಿ ಒಪ್ಪಿಗೆ ಪಡೆಯಲು ಮೇಲ್ಮನೆಯಲ್ಲಿ ವಿಷಯವು ಚರ್ಚಿತವಾದ ಸಂದರ್ಭದಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರ ಅನುದಾನರಹಿತ ಸೇವೆಯನ್ನು ವೇತನ ನಿಗಧಿಗೆ ಪಿಂಚಣಿ ಸೌಲಭ್ಯಕ್ಕೆ ಒಳಪಡಿಸಿದಲ್ಲಿ ವಾರ್ಷಿಕ ರೂ. 285 ರಿಂದ 300 ಕೋಟಿಗಳಾಗುವುದೆಂದು ಮಾನ್ಯ ಸದಸ್ಯರುಗಳು ತಿಳಿಸಿದ ಮೇರೆಗೆ ಈ ಬಗ್ಗೆ ಪರಿಶೀಲಿಸಲಾಗುವುದೆಂದು ಅಂದಿನ ಉನ್ನತ ಶಿಕ್ಷಣ ಸಚಿವರು ನೀಡಿದ ಹೇಳಿಕೆಯಂತೆ, ಕಾಲ್ಪನಿಕ ವೇತನ ನಿಗಧಿಪಡಿಸಿದಲ್ಲಿ ಉಂಟಾಗಬಹುದಾದ ಅಂದಾಜು
ಆ)	ಇದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಅಗತ್ಯಕ್ರಮಗಳೇನು;	
ಇ)	ಯಾವಾಗ ಈ ಬಗ್ಗೆ ಕ್ರಮವಹಿಸಲಾಗುವುದು? (ವಿವರ ನೀಡುವುದು)	

		ಆರ್ಥಿಕ ವೆಚ್ಚದ ಮತ್ತು ಸಾಧಕ-ಬಾಧಕಗಳ ಬಗ್ಗೆ ಪರಿಶೀಲಿಸಿ ವರದಿ ನೀಡಲು ಶ್ರೀ ಬಸವರಾಜ ಹೊರಟ್ಟಿ, ಮಾನ್ಯ ವಿಧಾನ ಪರಿಷತ್ತು ಸದಸ್ಯರು, ಇವರನ್ನೊಳಗೊಂಡಂತೆ ಪರಿಶೀಲನಾ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಪರಿಶೀಲನಾ ಸಮಿತಿಯು ಎರಡು ವರದಿಗಳನ್ನು ಕ್ರಮವಾಗಿ ದಿನಾಂಕ : 17/03/[illegible]15 ಮತ್ತು 06/02/2018ರಂದು ಸರ್ಕಾರಕ್ಕೆ ಸಲ್ಲಿಸಿದ್ದು [illegible]ದಿ ಕುರಿತಂತೆ ಪರಿಶೀಲಿಸಲಾಗುತ್ತಿದೆ.

(ಹೆಚ್. ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ

ಸಂಖ್ಯೆ: ಇಡಿ 718 ಎಸ್‌ಇಎಸ್ 2018)